ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಶ್ರೀ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-

51 (114) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ವಿಶ್ವವಿದ್ಯಾಲಯದ ತ್ರಿಭಜನೆಯ ಹಿನ್ನಲೆಯಲ್ಲಿ ಕೋಲಾರ ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ವಿಭಾಗಗಳಲ್ಲಿನ ಬೋಧನಾ ಅಗತ್ಯಗಳಿಗೆ ಅನುಗುಣವಾಗಿ ನೇಮಕಗೊಂಡಿದ್ದ ಅಧ್ಯಾಪಕರಿಗೆ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಹೋಗಲು ಅವಕಾಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಂಬಂಧಪಟ್ಟ ವಿಭಾಗಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಅಧ್ಯಾಪಕರು ಸೇರ್ಪಡೆಯಾಗಿದ್ದು, ಕೋಲಾರದಿಂದ ಬೆಂಗಳೂರಿಗೆ ಹೊರ ಅಧ್ಯಾಪಕರಿಗೆ ಕಾರ್ಯಭಾರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾರ್ಯಭಾರವೇ ಇಲ್ಲದೇ ಅಧ್ಯಾಪಕರಿಗೆ ವೇತನ ನೀಡುವಂತಾಗಿರುವುದು ಸಾರ್ವಜನಿಕ ಸಂಪತ್ತಿನ ಅಪವ್ಯಯವಾಗುತ್ತಿರುವುದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?